ಈ) ಇಲ್ಲ.

ಮಾಗಡಿ ತಾಲ್ಲೂಕಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭ

199(558) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಾಗಡಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಅ) ಬಂದಿದ್ದಲ್ಲಿ, ಮಾಗಡಿ ತಾಲ್ಲೂಕಿನ ಯಾವ್ಯಾವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂದಿರುತ್ತದೆ ;

ಇ) ಯಾವ್ಯಾವ ಕಾಲೇಜುಗಳಲ್ಲಿ ಈ ಸಾಲಿನಿಂದ ಪ್ರಾರಂಭಿಸಲಾಗಿದೆ ; ಉಳಿದ ಕಾಲೇಜುಗಳಲ್ಲಿ ಯಾವ ಸಾಲಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಹೌದು.

ಆ) ಮಾಗಡಿ ತಾಲ್ಲೂಕಿನ ಈ ಕೆಳಕಂಡ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂದಿರುತ್ತದೆ.

1. ಸರ್ಕಾರಿ ಪದವಿ ಪೂರ್ವ ಕಾಲೇಜು, ಮಂಚನಬೆಲೆ, ಮಾಡಬಾಳ್ ಹೋಬಳಿ, ಮಾಗಡಿ ತಾಲ್ಲೂಕು.

2. ಸರ್ಕಾರಿ ಪದವಿ ಪೂರ್ವ ಕಾಲೇಜು, ಮರೂರು ಹ್ಯಾಂಡ್ ಪೋಸ್ಟ್, ಮಾಗಡಿ ತಾಲ್ಲೂಕು.

3. ಸರ್ಕಾರಿ ಪದವಿ ಪೂರ್ವ ಕಾಲೇಜು, ತಿಪ್ಪಸಂದ್ರ, ಮಾಗಡಿ ತಾಲ್ಲೂಕು.

4. ಸರ್ಕಾರಿ ಪದವಿ ಪೂರ್ವ ಕಾಲೇಜು, ಅಗಲಕೋಟೆ ಹ್ಯಾಂಡ್ ಪೋಸ್ಟ್, ಮಾಗಡಿ ತಾಲ್ಲೂಕು.

ಇ) ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಅಗಲಕೋಟೆ ಹ್ಯಾಂಡ್ ಪೋಸ್ಟ್, ಮಾಗಡಿ ತಾಲ್ಲೂಕು ಇಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲಾಗಿದೆ.

ಅನುದಾನ ಲಭ್ಯತೆಯನ್ನು ಆಧರಿಸಿ, ಅಗತ್ಯತೆಗನುಗುಣವಾಗಿ ಉಳಿದ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಕ್ರಮಕೈಗೊಳ್ಳಲಾಗುವುದು.

ಉಪನ್ಯಾಸಕರುಗಳನ್ನು ಮಾತೃ ಇಲಾಖೆಗೆ ಕಳುಹಿಸುವುದು

267 (563) ಶ್ರೀ ಪ್ರಕಾಶ್ ಹೆಚ್.ಎಸ್. (ಹಾಸನ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದ ಪದವಿ ಪೂರ್ವ ಕಾಲೇಜು ಉಪನ್ಯಾಸಕರುಗಳು ಸಮಾಜ ಕಲ್ಯಾಣ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಉಪನ್ಯಾಸಕರುಗಳನ್ನು ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಮಾತೃ ಇಲಾಖೆಗೆ ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

(ಅ) ಬಂದಿದೆ.

(ಆ) ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಹಾಗೂ ಪ್ರಾಥಮಿಕ ಶಾಲಾ ಮತ್ತು ಪ್ರೌಢ ಶಾಲಾ ಸಹಶಿಕ್ಷಕರನ್ನು ಬೋಧಕೇತರ ಕಾರ್ಯಗಳಿಗಾಗಿ ನಿಯೋಜಿಸಬಾರದೆಂದು ಸುತ್ತೋಲೆ ಸಂಖ್ಯೆ: ಇಡಿ 300 ಡಿಜಿಡಿ 2011 ದಿನಾಂಕ: 08–11–2011 ರಂದು ಹೊರಡಿಸಿದೆ. ಅದರಂತೆ, ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಅನ್ಯ ಇಲಾಖೆಗೆ ನಿಯೋಜನೆ/ಎರವಲು ಸೇವೆಯಲ್ಲಿರುವ ಉಪನ್ಯಾಸಕರುಗಳನ್ನು ಮಾತೃ ಇಲಾಖೆಗೆ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

219 (167) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) ಮಾನ್ಯ ಸಹಕಾರ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯ ಸರ್ಕಾರವು ರೈತರಿಗೆ ಶೇ.2 ಮತ್ತು ಶೇ.1ರ ಬಡ್ಡಿ ದರದಲ್ಲಿ ಸಾಲ ನೀಡುವ ಯೋಜನೆಯಡಿಯಲ್ಲಿ ಕಳೆದ 3 ವರ್ಷಗಳಿಂದ ಇಲ್ಲಿಯವರೆವಿಗೆ ಎಷ್ಟು ಜನರಿಗೆ ಅನುಕೂಲ ಮಾಡಿಕೊಟ್ಟಿದೆ; ಈ ಯೋಜನೆಯಡಿಯಲ್ಲಿ ನೀಡಲಾಗುವ ಗರಿಷ್ಠ ಮೊತ್ತದ ಸಾಲವೆಷ್ಟು?